ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.713/2024</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಮಹಮ್ಮದ್ ಫರಾನ್ | ಪಿ.ಡಬ್ಲ್ಯೂ.3 |
| ತಂದೆಯ ಹೆಸರು | : | ತಾಸಿನ್ ಬೇಗ್ | ಸಿ.ಡಬ್ಲ್ಯೂ.3 |
| ವಯಸ್ಸು | : | 25 ವರ್ಷ | |
| ವೃತ್ತಿ | : | ಆಟೋ ಚಾಲಕ | |
| ವಾಸ | : | ಅಂಡೆಛತ್ರ, ಚಿಕ್ಕಮಗಳೂರು | |

<u>ದಿನಾಂಕಃ 21-04-2026 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿಯ ಪರಿಚಯವಿಲ್ಲ. ಚಾಸಾ-2 ರವರ ಪರಿಚಯವಿದೆ. ನೋಟೀಸ್ ಅನ್ನು ಹಾಗೂ ಮಹಜರ್ ಅನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಮತ್ತು 2 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-1(ಸಿ) ಹಾಗೂ ನಿಪಿ-2(ಸಿ) ಇರುತ್ತದೆ. ಸದರಿ ಸಹಿಯನ್ನು ನಾನು ನಗರ ಪೊಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಪೊಲೀಸರ ಕೋರಿಕೆ ಮೇರೆಗೆ ಸದರಿ ಈಗ ಒಂದು ವರ್ಷದ ಹಿಂದೆ ಹಾಕಿರುತ್ತೇನೆ. ಯಾವ ವಿಚಾರಕ್ಕಾಗಿ ಸದರಿ ಸಹಿಯನ್ನು ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನಮ್ಮನ್ನು ಆಟೋದಲ್ಲಿ ಕರೆದುಕೊಂಡು ಹೋಗಿರುತ್ತಾರೆ. ಪೊಲೀಸರು ದನವನ್ನು ಹಿಡಿದಿರುವ ವಿಚಾರವಾಗಿ ಕರೆದುಕೊಂಡು ಹೋಗಿದ್ದರು. ಘಟನಾ ಸ್ಥಳದಲ್ಲಿ

ಸಹಿಯನ್ನು ಪಡೆದುಕೊಂಡಿರುತ್ತಾರೆ ಹಾಗೂ ಫೋಟೋ ತೆಗೆದಿರುತ್ತಾರೆ. ಸದರಿ ಫೋಟೋವನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿರುತ್ತದೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿರುವುದಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ13.02.2024 ರಂದು ಮಧ್ಯರಾತ್ರಿಃ12.30 ರಿಂದ 01.30 ರವರಗೆ ಘಟನಾ ಸ್ಥಳದಲ್ಲಿ ಪೊಲೀಸರು ನಿಪಿ-2 ರಂತೆ ಮಹಜರ್ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ 175 ಕೆ.ಜಿ ದನದ ಮಾಂಸ, 2 ದೊಡ್ಡ ಕತ್ತಿ, ಒಂದು ಚಾಕು, ಒಂದು ಹರ, 2 ಕಬ್ಬಿಣದ ಹುಕ್ಕುಗಳು, ಒಂದು ಡಿಜಿಟಲ್ ತೂಕದ ಯಂತ್ರ, ಒಂದು ಪ್ಲಾಸ್ಟೀಕ್ ಟಬ್ ಅನ್ನು ಹಾಗೂ ಒಂದು ಕಬ್ಬಿಣದ ರಾಡ್, ಒಂದು ಫ್ರಿಡ್ಜ್ ಅನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಎಲ್ಲಾ ವಸ್ತುಗಳನ್ನು ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡಿದ್ದರೂ ಕೂಡಾ ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

(ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

<u>ಮರು ವಿಚಾರಣೆಃ ಇಲ್ಲಾ.</u>

C.C.No.713/2024
PW-3 CW-3

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್‌ಆರ್‌ಃ